RNU AIR DHARWAD

OCTOBER 9, 2024

ALL INDIA RADIO- DHARWAD

PRADESH SAMACHARA (KANNADA) 7:05 AM

ಮುಖ್ಯಾಂಶಗಳು

- ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಕಾಲ ಮಿತಿಯಲ್ಲಿ ಭರ್ತಿ ಮಾಡುವಂತೆ, ಮುಖ್ಯಮಂತ್ರಿ ಸೂಚನೆ.
- ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಸದ್ಯದಲ್ಲೇ ಸಭೆ–ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ.
- ಮಹಿಳೆಯರ ಸ್ವಾವಲಂಬಿ ಬದುಕು ಉತ್ತೇಜಿಸಲು, ರಾಜ್ಯಾದ್ಯಂತ 50 ಅಕ್ಕ ಕೆಫೆ ಸ್ಥಾಪನೆ– ಕೌಶಲಾಭಿವೃದ್ಧಿ ಖಾತೆ ಸಚಿವ ಶರಣಪ್ರಕಾಶ ಪಾಟೀಲ.
- ಕಿತ್ತೂರಿನ ಸಮಗ್ರ ಅಭಿವೃದ್ಧಿಗಾಗಿ, 60 ಕೋಟಿ ರೂಪಾಯಿ ಅನುದಾನ–ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ.

ಈಗ ವಾರ್ತೆಗಳ ವಿವರ

*******

ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ 34 ಸಾವಿರದ 863 ಹುದ್ದೆಗಳನ್ನು ಕಾಲ ಮಿತಿಯಲ್ಲಿ ಭರ್ತಿ ಮಾಡುವಂತೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ವಿವಿಧ ಇಲಾಖೆಗಳ ನೇಮಕಾತಿ ಕುರಿತು, ಬೆಂಗಳೂರಿನಲ್ಲಿ ನಿನ್ನೆ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಅವರು, ಕಲಂ 371 ಜೆ ಗೆ ಸಂಬಂಧಿಸಿದಂತೆ, ಕಲ್ಯಾಣ ಕರ್ನಾಟಕದ ಸ್ಥಳೀಯ ವ್ಯಕ್ತಿಗಳಿಗೆ ಮೀಸಲಿರಿಸಿರುವ, ನೇರ ನೇಮಕಾತಿ ಹುದ್ದೆಗಳ ಭರ್ತಿ ಕುರಿತು ಸೂಚನೆ ನೀಡಿದರು. 2023 ರಲ್ಲಿ ಹೊರಡಿಸಲಾದ ಸುತ್ತೋಲೆ ಅನುಸರಿಸಿ, ಕ್ರಮ ಕೈಗೊಳ್ಳುವಂತೆ, ಮುಖ್ಯಮಂತ್ರಿ ಆದೇಶಿಸಿದರು.

*******

ತುಂಗಭದ್ರಾ ಜಲಾಶಯದಲ್ಲಿ ಹೂಳು ತುಂಬಿದ ಹಿನ್ನೆಲೆ, 33 ಟಿ.ಎಂ.ಸಿ. ಅಡಿಯಷ್ಟು ನೀರಿನ ಕೊರತೆಯಾಗಿದೆ. ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಸದ್ಯದಲ್ಲೇ ಆಂಧ್ರ, ತೆಲಂಗಾಣ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಸಭೆ ಆಯೋಜಿಸಲಾಗುವುದು ಎಂದು ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ ತಿಳಿಸಿದ್ದಾರೆ. ರಾಯಚೂರು ಜಿಲ್ಲೆ, ಸಿಂಧನೂರು ನಗರದಲ್ಲಿ ಆಯೋಜಿಸಿದ್ದ ದಸರಾ ಉತ್ಸವದಲ್ಲಿ, 5 ದಿನಗಳ ರೈತ ದಸರಾ ಕಾರ್ಯಕ್ರಮ ಉದ್ಘಾಟಿಸಿ, ಮಾತನಾಡಿದ ಅವರು, ತುಂಗಭದ್ರಾ ಜಲಾಶಯ ನಿರ್ಮಾಣಗೊಂಡು, 7 ದಶಕಗಳು ಕಳೆದ ಹಿನ್ನೆಲೆ, ಗೇಟ್ ಪರಿಶೀಲನೆಗೆ ತಾಂತ್ರಿಕ ಸಮಿತಿ ರಚಿಸಲಾಗಿದೆ. ಜಲಾಶಯದಲ್ಲಿ ನೀರು ಕಡಿಮೆಯಾದ ನಂತರ, ಗೇಟ್ ಬದಲಿಸುವ ಕೆಲಸ ಆರಂಭಿಸಲಾಗುವುದು ಎಂದು ಅವರು ಹೇಳಿದರು.

*******

ಮಹಿಳಾ ಸಬಲೀಕರಣ ಹಾಗೂ ಮಹಿಳೆಯರ ಸ್ವಾವಲಂಬಿ ಬದುಕನ್ನು ಉತ್ತೇಜಿಸಲು, ರಾಜ್ಯ ಸರ್ಕಾರ ರಾಜ್ಯಾದ್ಯಂತ 50 ಅಕ್ಕ ಕೆಫೆ ಸ್ಥಾಪಿಸಲಿದೆ ಎಂದು, ಕೌಶಲಾಭಿವೃದ್ಧಿ ಮತ್ತು ಜೀವನೋಪಾಯ ಖಾತೆ ಸಚಿವ ಶರಣಪ್ರಕಾಶ ಪಾಟೀಲ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ, 'ಸಂಜೀವಿನಿ', ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ ನಿರ್ಮಿತ, ಅಕ್ಕ ಕೆಫೆ  ಉದ್ಘಾಟಿಸಿ ಮಾತನಾಡಿದ ಅವರು, ಮಹಿಳೆಯರ ಸಬಲೀಕರಣಕ್ಕಾಗಿ ರಾಜ್ಯಾದ್ಯಂತ 2 ಸಾವಿರದ 500 ಕಾಫಿ ಕೆಫೆ ಸ್ಥಾಪಿಸುವ ಯೋಜನೆ ಇದೆ. ಸ್ವ ಸಹಾಯ ಗುಂಪಿಗೆ ಸೇರಿದ, 12 ಜನ ಮಹಿಳೆಯರ ತಂಡ ಈ ಕೆಫೆಯನ್ನು ಮುನ್ನಡೆಸಲಿದೆ. ಅಕ್ಕ ಕೆಫೆ ಬೆಳಗ್ಗೆ 9 ರಿಂದ ರಾತ್ರಿ 9ರ ವರೆಗೆ ವಾರವಿಡಿ ಕಾರ್ಯ ನಿರ್ವಹಿಸಲಿದೆ ಎಂದರು.

*******

ಕಿತ್ತೂರಿನ ಇತಿಹಾಸ ಮತ್ತು ಸ್ಮಾರಕಗಳ ರಕ್ಷಣೆ ಹಾಗೂ ಕಿತ್ತೂರಿನ ಸಮಗ್ರ ಅಭಿವೃದ್ಧಿಗಾಗಿ, ಮುಖ್ಯಮಂತ್ರಿಯವರು 60 ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಿದ್ದಾರೆ ಎಂದು, ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ. ಬೆಳಗಾವಿ ಜಿಲ್ಲೆ ಕಿತ್ತೂರಿನಲ್ಲಿ, ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ವಿವಿಧ ಕಾಮಗಾರಿಗಳಿಗೆ ಶಂಕು ಸ್ಥಾಪನೆ ನೆರವೇರಿಸಿ, ಮಾತನಾಡಿದ

ಅವರು, ಕಿತ್ತೂರು ಕೋಟೆ ಹಾಗೂ ಅರಮನೆ ರಕ್ಷಣೆಗೆ ಆದ್ಯತೆ ನೀಡಲಾಗಿದೆ. ಕಿತ್ತೂರಿಗೆ ತನ್ನದೇ ಆದ ಇತಿಹಾಸವಿದ್ದು, ಹೊಸ ತಲೆಮಾರಿಗೆ ರಾಣಿ ಚನ್ನಮ್ಮಾಜಿಯ ಸಾಹಸ ಪರಿಚಯಿಸುವ ಯೋಚನೆ ಇದೆ ಎಂದು ಸಚಿವರು ಹೇಳಿದರು.

*******

ಪಶ್ಚಿಮಘಟ್ಟಗಳ ಸಂರಕ್ಷಣೆ ಕುರಿತಾದ, ಕಸ್ತೂರಿ ರಂಗನ್ ವರದಿ ಅನುಷ್ಠಾನ ಸಂಬಂಧ, ರಾಜ್ಯ ಸರ್ಕಾರ, ಕೇಂದ್ರಕ್ಕೆ ತನ್ನ ಸ್ಪಷ್ಟ ನಿಲುವು ತಿಳಿಸಬೇಕು ಎಂದು, ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಆಗ್ರಹಿಸಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ, ನವೀಕೃತ ಸಂಸದರ ಕಚೇರಿ ಉದ್ಘಾಟಿಸಿ, ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಶ್ಚಿಮಘಟ್ಟ ಹಾಗೂ ಪರಿಸರದ ರಕ್ಷಣೆಯ ಹಿತದೃಷ್ಟಿಯಿಂದ, ಜನರಿಗೆ ತೊಂದರೆಯಾಗದಂತೆ ಕಸ್ತೂರಿರಂಗನ್ ವರದಿಯನ್ನು, ಜಾರಿಗೆ ತರುವ ನಿಟ್ಟಿನಲ್ಲಿ, ರಾಜ್ಯದ ಸಂಸದರ ಸಹಕಾರದಲ್ಲಿ ಕೇಂದ್ರದಲ್ಲಿ ಪ್ರಯತಿಸುವುದಾಗಿ, ತಿಳಿಸಿದರು. ಜಿಲ್ಲಾಧಿಕಾರಿ ನ್ಯಾಯಾಲಯ ಮತ್ತು ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿರುವ ಭೂ ಸ್ವಾಧೀನಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ನಿರ್ದೇಶಿಸುವುದಾಗಿ ಅವರು ತಿಳಿಸಿದರು.

*******

ಕೊಂಕಣ ರೇಲ್ವೆ ಮತ್ತು ಸೀ ಬರ್ಡ್ ನೌಕಾ ನೆಲೆ ಯೋಜನೆ ಭೂ ಸ್ವಾಧೀನ ಪರಿಹಾರ ಸಿಗದಿರುವ, ನಿರಾಶ್ರಿತರ ಸಮಸ್ಯೆಗಳಿಗೆ, ಕೇಂದ್ರ ಸರ್ಕಾರದೊಂದಿಗೆ ಚರ್ಚಿಸಿ, ನ್ಯಾಯಬದ್ಧ ಪರಿಹಾರ ಒದಗಿಸಲು, ಕ್ರಮ ಕೈಗೊಳ್ಳುವುದಾಗಿ ಉತ್ತರಕನ್ನಡ ಸಂಸದ, ವಿಶ್ವೇಶ್ವರ ಹೆಗಡೆ ಕಾಗೇರಿ ಭರವಸೆ ನೀಡಿದ್ದಾರೆ.ಕಾರವಾರದಲ್ಲಿ ಆಯೋಜಿಸಿದ್ದ ಕೊಂಕಣ ರೇಲ್ವೆ ಮತ್ತು ನೌಕಾನೆಲೆಯ ನಿರಾಶ್ರಿತರ, ಕುಂದು ಕೊರತೆಗಳ ಅಹವಾಲು ಸ್ವೀಕಾರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಷ್ಟ್ರದ ಮಹತ್ವಾಕಾಂಕ್ಷೆ ಯೋಜನೆಗಳಿಗೆ, ಜಿಲ್ಲೆಯ ಜನತೆ, ತಮ್ಮ ಜಮೀನುಗಳನ್ನು ನೀಡಿ, ದೇಶದ ಅಭಿವೃದ್ಧಿಗೆ ಮಹತ್ವದ ಕೊಡುಗೆ ನೀಡಿದ್ದಾರೆ ಎಂದರು. ಜಿಲ್ಲಾಧಿಕಾರಿ ನ್ಯಾಯಾಲಯ ಮತ್ತು ಉಪ ವಿಭಾಗಾಧಿಕಾರಿ ನ್ಯಾಯಾಲಯದಲ್ಲಿರುವ, ಭೂ ಸ್ವಾಧೀನಕ್ಕೆ ಸಂಬಂಧಿಸಿದ ಪ್ರಕರಣಗಳನ್ನು ಶೀಘ್ರ ವಿಲೇವಾರಿ ಮಾಡಲು ನಿರ್ದೇಶಿಸುವುದಾಗಿ ತಿಳಿಸಿದರು.

*******

ನವೆಂಬರ್ 1 ರಂದು, ಬೆಳಗಾವಿಯಲ್ಲಿ ಕರ್ನಾಟಕ ರಾಜ್ಯೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುವುದು. ಕರಾಳ ದಿನಾಚರಣೆಗೆ ಅವಕಾಶವಿಲ್ಲ ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸ್ಪಷ್ಟ ಪಡಿಸಿದ್ದಾರೆ. ಬೆಳಗಾವಿ ಜಿಲ್ಲಾ ಪಂಚಾಯ್ತಿ ಸಭಾಂಗಣದಲ್ಲಿ ಜರುಗಿದ, ಕರ್ನಾಟಕ ರಾಜ್ಯೋತ್ಸವ ದಿನಾಚರಣೆ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ರಾಜ್ಯೋತ್ಸವದ ಹಿನ್ನೆಲೆ, ಕನ್ನಡ ನಾಡು ನುಡಿಗಾಗಿ ಶ್ರಮಿಸಿದ, ಕನ್ನಡ ಹೋರಾಟಗಾರರನ್ನು ಸನ್ಮಾನಿಸಲಾಗುವುದು ಎಂದರು.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ..

*******

ಮನುಷ್ಯ ಪರಿಸರದ ಮೇಲೆ ಸಂಪೂರ್ಣ ಅವಲಂಬಿತ; ಆದರೆ, ಪರಿಸರ ಮನುಷ್ಯನ ಮೇಲೆ ಎಳ್ಳಷ್ಟೂ ಅವಲಂಬಿತವಲ್ಲ ಎಂದು, ಖ್ಯಾತ ಪರಿಸರವಾದಿ ಸುರೇಶ ಹೆಬ್ಳೀಕರ ಅಭಿಪ್ರಾಯಪಟ್ಟಿದ್ದಾರೆ. ಧಾರವಾಡ ಕರ್ನಾಟಕ ವಿಶ್ವವಿದ್ಯಾಲಯದ, ಗಾಂಧಿ ಅಧ್ಯಯನ ವಿಭಾಗ, ಸಿನೆಟ್ ಸಭಾ ಭವನದಲ್ಲಿ ಆಯೋಜಿಸಿದ್ದ, 'ಸಮಕಾಲೀನ ಪರಿಸರ ಬಿಕ್ಕಟ್ಟಿನ ಸಂದರ್ಭದಲ್ಲಿ ಗಾಂಧಿ ಚಿಂತನೆ' – ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡು, ಮಾತನಾಡಿದರು. ಹಿರಿಯ ಪರಿಸರ ಅರ್ಥಶಾಸ್ತ್ರಜ್ಞ ಪ್ರೊಫೆಸರ್ ಗೋಪಾಲ ಕಡೇಕೋಡಿ ಮಾತನಾಡಿ, ಗಾಂಧೀಜಿ ಅವರ ಸರ್ವೋದಯ ಮತ್ತು ಗ್ರಾಮಾಭಿವೃದ್ಧಿ ವಿಚಾರ, ಜೆ.ಸಿ. ಕುಮಾರಪ್ಪ ಅವರ ಚಿಂತನೆಗಳಿಂದ ಪ್ರಭಾವಿತವಾಗಿವೆ. ಸಂಪನ್ಮೂಲಗಳ ಒಡೆತನ ಸ್ಥಳೀಯ ಸಮುದಾಯಗಳಿಗೆ ಸೇರಿದೆ ಎಂಬ ಭಾವ, ಸ್ವಭಾವವಾಗಿದೆ ಎಂದರು. ಕಪ್ಪತ್ತಗುಡ್ಡದ ನಂದಿವೇರಿ ಮಠದ ಶ್ರೀ ಶಿವಕುಮಾರ ಸ್ವಾಮೀಜಿ ಮಾತನಾಡಿ, ಮುಂದಿನ ಪೀಳಿಗೆಯ ಬದುಕಿಗೆ ಆಸರೆಯಾಗಬೇಕಿರುವ ಪರಿಸರವನ್ನು ಕಡ ಪಡೆದು ಬಳಸುತ್ತಿದ್ದೇವೆ ಎಂಬ, ವಿವೇಕ ಪ್ರಜ್ಞೆ,ಗಾಂಧೀಜಿ ಬೆಳೆಸಿದರು, ಎಂದರು.

*******

ಶರನ್ನವರಾತ್ರಿಯ 7ನೇ ದಿನವಾದ ಇಂದು, ಸಪ್ತಮಿ ತಿಥಿ ಹಿನ್ನೆಲೆ, ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ, ಹೊರನಾಡು, ಬಾಳೆಹೊನ್ನೂರು ಹಾಗೂ ಬೀಕನಹಳ್ಳಿ ಚಾಮುಂಡೇಶ್ವರಿ ದೇವಾಲಯದಲ್ಲಿ, ದಸರಾ ಉತ್ಸವಾಚರಣೆ ಶ್ರದ್ಧಾ ಭಕ್ತಿಯಿಂದ ನಡೆಯುತ್ತಿದೆ. ಧಾರವಾಡದ ರವಿವಾರ ಪೇಟೆಯ, ಶ್ರೀ ಲಕ್ಷ್ಮೀ ನಾರಾಯಣ ದೇಗುಲದಲ್ಲಿ ಇಂದು, ವಿಠ್ಠಲ–ರುಕ್ಮಾಯಿ ವೇಶ ತೊಡಿಸಿ,

ಪೂಜಿಸಲಾಗಿದೆ. ಧಾರವಾಡದ ಶಾಂತಿನಿಕೇತನ ನಗರದ, ಶ್ರೀ ಕರಿಯಮ್ಮ ದೇವಿ ದೇವಸ್ಥಾನದಲ್ಲಿ, ಶ್ರೀ ಮಹಾ ಸರಸ್ವತಿ ಅವತಾರ ತೊಡಿಸಿ, ಪೂಜಾ ಕೈಂಕರ್ಯ ನಡೆಸಲಾಗಿದೆ.

*******

'ಸಮಷ್ಟಿ ಕವಿಗೋಷ್ಠಿ' ದಸರಾ ಉತ್ಸವದ ಹೊಸ ವೈಶಿಷ್ಟ್ಯವಾಗಿದ್ದು, ಭಾವೈಕ್ಯತೆ ಮತ್ತು ಸಾಮರಸ್ಯ ಮೆರೆಸುವ ವೇದಿಕೆಯಾಗಿದೆ ಎಂದು, ಹಿರಿಯ ಸಾಹಿತಿ ಡಾಕ್ಟರ್ ಎಚ್.ಎಸ್. ಶಿವಪ್ರಕಾಶ ಹೇಳಿದರು. ಮೈಸೂರಿನ ಜಗನ್ಮೋಹನ ಅರಮನೆಯಲ್ಲಿ ಪ್ರಥಮ ಬಾರಿಗೆ ಆಯೋಜಿಸಲಾಗಿದ್ದ ಸಮಷ್ಟಿ ಕವಿಗೋಷ್ಠಿಯನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಂವೇದನೆ ಎಂಬುದು ಎಲ್ಲ ಭಾಷೆಗಳಲ್ಲಿಯೂ ಸಮಾನ. ಬಹುಭಾಷೆಯ ಈ ಸಮ್ಮಿಲನ ಉದ್ಯಾನವನದಲ್ಲಿ ಅಲಂಕರಿಸಿದ ಬಗೆ ಬಗೆಯ ಹೂಗಳಿದ್ದಂತೆ ಎಂದು ವರ್ಣಿಸಿದರು. ಮೈಸೂರು ದಸರಾ ಕವಿಗೋಷ್ಠಿಯ, ಪಂಚ ಕಾವ್ಯೋತ್ಸವದ ನಾಲ್ಕನೇ ದಿನವಾದ ನಿನ್ನೆ, 'ಸಮಷ್ಟಿ ಕವಿಗೋಷ್ಠಿ' ನಡೆಯಿತು.

*******

ಧಾರವಾಡ ದಸರಾ ಮಹೋತ್ಸವ ಹಾಗೂ ಜಂಬೂ ಸವಾರಿ ಮೆರವಣಿಗೆ, ಉತ್ತರ ಕರ್ನಾಟಕ ಭಾಗಕ್ಕೆ ವಿಶೇಷ ಮೆರಗು ತಂದಿದೆ ಎಂದು, ಪದ್ಮಶ್ರೀ ಪುರಸ್ಕೃತ, ಖ್ಯಾತ ಹಿಂದೂಸ್ಥಾನಿ ಗಾಯಕ, ಪಂಡಿತ ಎಂ. ವೆಂಕಟೇಶಕುಮಾರ, ಶ್ಲಾಘಿಸಿದ್ದಾರೆ. ಧಾರವಾಡದ ಗಾಂಧಿ ನಗರದಲ್ಲಿ, ಶ್ರೀ ಈಶ್ವರ ದೇವಸ್ಥಾನದ ಆವರಣದಲ್ಲಿ, ದಸರಾ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಚಾಲನೆ ನೀಡಿ, ಅವರು ಮಾತನಾಡಿದರು.

*******

ಲಿಂಗ ಆಯ್ಕೆ ಮತ್ತು ತಾರತಮ್ಯ ನಿವಾರಣೆ, ಹೆಣ್ಣು ಮಕ್ಕಳ ರಕ್ಷಣೆ ಮತ್ತು ಶಿಕ್ಷಣವನ್ನು ಖಾತ್ರಿ ಪಡಿಸುವ, ಕೇಂದ್ರ ಸರ್ಕಾರದ, 'ಬೇಟಿ ಬಚಾವೋ, ಬೇಟಿ ಪಢಾವೋ' ಯೋಜನೆ, ಜಾರಿಗೊಂಡಿದೆ. ಧಾರವಾಡ ಜಿಲ್ಲಾ ಸಿವಿಲ್ ಆಸ್ಪತ್ರೆಯಲ್ಲಿ, ಶಿಶು ಅಭಿವೃದ್ಧಿ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿದ, ಜಿಲ್ಲಾ ನ್ಯಾಯಾಧೀಶ ಪರಶುರಾಮ ದೊಡ್ಡಮನಿ, ಹೆಣ್ಣು ಮಕ್ಕಳು ಕಾನೂನು ಸಾಕ್ಷರರಾಗಬೇಕು. ಶಿಕ್ಷಣ ಪಡೆದು ಸಶಕ್ತರಾಗಬೇಕು. ಆರ್ಥಿಕವಾಗಿ ಸ್ವಾವಲಂಬಿಗಳಾಗಬೇಕು. ಸುದೃಢ ಆರೋಗ್ಯ ಹೊಂದಬೇಕು ಎಂದು ಸಲಹೆ ನೀಡಿದರು.

*******

ಬಾಹ್ಯಾಕಾಶ ವಿಜ್ಞಾನ ಕ್ಷೇತ್ರದಲ್ಲಿ, ಭಾರತದ ಅಭಿವೃದ್ಧಿ ಜಗತ್ತಿನ ಇತರೆ ರಾಷ್ಟ್ರಗಳಿಗೆ ಮಾದರಿಯಾಗಿದೆ ಎಂದು, ಖಗೋಳ ವಿಜ್ಞಾನಿ ಎಂ.ಬಿ.ಶರಣಪ್ಪ ಹೇಳಿದ್ದಾರೆ. ದಾವಣಗೆರೆಯ ಎ.ವಿ.ಕೆ. ಮಹಿಳಾ ಮಹಾವಿದ್ಯಾಲಯದಲ್ಲಿ, ರಾಜ್ಯ ವಿಜ್ಞಾನ ಪರಿಷತ್ ಹಾಗೂ ಜಿಲ್ಲಾ ಬಾಲ ಭವನ ಸಮಿತಿ ಆಯೋಜಿಸಿದ್ದ, 'ಆಕಾಶದ ಕೌತುಕ' ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ, ಅವರು ಮಾತನಾಡಿದರು. 'ಇಸ್ರೋ' ಉಪಗ್ರಹಗಳ ಉಡಾವಣೆ, ಇತರೆ ಗ್ರಹಗಳ ಅನ್ವೇಷಣೆಯಲ್ಲಿ ಭಾರತವನ್ನು ಜಾಗತಿಕ ಬಾಹ್ಯಾಕಾಶ ತಂತ್ರಜ್ಞಾನದ ಪಥದಲ್ಲಿ ಮುಖ್ಯ ಸ್ಥಾನದಲ್ಲಿರಿಸಿದೆ. ಭಾರತದ ಬಾಹ್ಯಾಕಾಶ ಯೋಜನೆ ಮತ್ತು ಸಾಧನೆಗಳು, ದೇಶದ ಆರ್ಥಿಕ, ತಾಂತ್ರಿಕ ಹಾಗೂ ವೈಜ್ಞಾನಿಕ ಬೆಳವಣಿಗೆಗೆ ಮಹತ್ತರ ಕೊಡುಗೆ ನೀಡಿವೆ ಎಂದು ಅವರು ನುಡಿದರು.

*******

ಮಿತವಾದ ನೀರು, ಪೋಷಕಾಂಶ ಒದಗಿಸಿ ತೋಟಗಾರಿಕಾ ಬೆಳೆಗಳನ್ನು ಬೆಳೆಯುವುದರಿಂದ, ಹೆಚ್ಚಿನ ಆದಾಯ ಪಡೆಯಲು ಸಾಧ್ಯ ಎಂದು, ಬಾಗಲಕೋಟೆಯ ತೋಟಗಾರಿಕೆ ವಿಶ್ವವಿದ್ಯಾಲಯದ ವಿದ್ಯಾಧಿಕಾರಿ ಡಾಕ್ಟರ್ ಬಾಲಾಜಿ ಕುಲಕರ್ಣಿ ಹೇಳಿದ್ದಾರೆ.
ತೋಟಗಾರಿಕೆ ವಿಶ್ವವಿದ್ಯಾಲಯದಲ್ಲಿರುವ, ದಾಳಿಂಬೆ ಉತ್ಕೃಷ್ಟತಾ ಕೇಂದ್ರದಲ್ಲಿ, ಇಂಡೋ–ಇಸ್ರೋ ಸಹಯೋಗದಲ್ಲಿ ಆಯೋಜಿತ, ನೀರಾವರಿ ಹಾಗೂ ರಸಾವರಿ ಕುರಿತ, ತರಬೇತಿ ಕಾರ್ಯಾಗಾರ ಉದ್ಘಾಟಿಸಿ, ಅವರು ಮಾತನಾಡಿದರು.

*******

ಈಗ ಸಂಕ್ಷಿಪ್ತ ಸುದ್ದಿಗಳು

ಚಿತ್ರದುರ್ಗದ ಮುರುಘಾಮಠದಲ್ಲಿ, ಶರಣ ಸಂಸ್ಕೃತಿ ಉತ್ಸವದ ಅಂಗವಾಗಿ, ಶ್ರೀ ಮಠದ ಆವರಣದಲ್ಲಿ ಆಯೋಜಿಸಲಾದ, ಕೃಷಿ ಹಾಗೂ ಕೈಗಾರಿಕಾ ಮೇಳವನ್ನು, ಮುಜರಾಯಿ ಖಾತೆ ಸಚಿವ ರಾಮಲಿಂಗಾರೆಡ್ಡಿ ಉದ್ಘಾಟಿಸಿದರು. (01)

ಹೈನುಗಾರರು, ತಮ್ಮ ಮೌಲ್ಯಯುತ ರಾಸುಗಳಿಗೆ ತಪ್ಪದೇ ಜೀವ ವಿಮೆ ಮಾಡಿಸಬೇಕೆಂದು, ಕೋಲಾರ ಹಾಲು ಒಕ್ಕೂಟದ ನಿರ್ದೇಶಕ ಎನ್.ಹನುಮೇಶ ಕೋರಿದ್ದಾರೆ. (27)

'ಕೃಷಿ ಭಾಗ್ಯ ಯೋಜನೆ' ಅಡಿ, ಕೃಷಿ ಹೊಂಡ, ಲಘು ನೀರಾವರಿ ಹಾಗೂ ತಂತಿ ಬೇಲಿ ಘಟಕ ಅಳವಡಿಸಿಕೊಳ್ಳಲು, ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 20ನೇ ತಾರೀಖು ಕೊನೆ ದಿನ.

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಹುದ್ದೆಗಳನ್ನು ಕಾಲ ಮಿತಿಯಲ್ಲಿ ಭರ್ತಿ ಮಾಡುವಂತೆ, ಮುಖ್ಯಮಂತ್ರಿ ಸೂಚನೆ.

ನವಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಸದ್ಯದಲ್ಲೇ ಸಭೆ–ಜಲ ಸಂಪನ್ಮೂಲ ಖಾತೆ ಸಚಿವ ಡಿ.ಕೆ.ಶಿವಕುಮಾರ.

ಮಹಿಳೆಯರ ಸ್ವಾವಲಂಬಿ ಬದುಕು ಉತ್ತೇಜಿಸಲು, ರಾಜ್ಯಾದ್ಯಂತ 50 ಅಕ್ಕ ಕೆಫೆ ಸ್ಥಾಪಿನೆ– ಕೌಶಲಾಭಿವೃದ್ಧಿ ಖಾತೆ ಸಚಿವ ಶರಣಪ್ರಕಾಶ ಪಾಟೀಲ.

ಕಿತ್ತೂರಿನ ಸಮಗ್ರ ಅಭಿವೃದ್ಧಿಗಾಗಿ, 60 ಕೋಟಿ ರೂಪಾಯಿ ಅನುದಾನ–ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಈ ಬೆಳಗ್ಗೆ 7 ಗಂಟೆ 35 ನಿಮಿಷಕ್ಕೆ.

****END****